# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಂ.ಜಿ.ಕಮ್ಮಾರ, ಕಿರಿಯ ಇಂಜಿನಿಯರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರ ಕಚೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಣೆಬೆನ್ನೂರು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಉಪ ಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:-**

1. ಉಪ ನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ Compt/Uplok/BGM-349/2007/DRE-1, ದಿನಾಂಕ. 28-09-2011.

*****

**ಪ್ರಸ್ತಾವನೆ:**

ಮೇಲೆ ಓದಲಾದ ದಿನಾಂಕ. 28-09-2011ರ ಅರೆ ಸರ್ಕಾರಿ ಪತ್ರದಲ್ಲಿ ಉಪ ನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಶ್ರೀ ಬಿ.ಬಿ.ಮುದ್ದಪ್ಪನವರ, ಗ್ರಾಮ ಪಂಚಾಯತ್ ಕಾರ್ಯದರ್ಶಿ ಮತ್ತು ಶ್ರೀ ನಾರಾಯಣಪ್ಪ ವಿ. ಗಾಯಕ್‌ವಾಡ್, ಅಧ್ಯಕ್ಷರು, ಮಾಸೂರು ಗ್ರಾಮ ಪಂಚಾಯತಿ, ಹಿರೆಕೆರೂರು ತಾಲ್ಲೂಕು ಮತ್ತು ಶ್ರೀ ಎಂ.ಜಿ.ಕಮ್ಮಾರ, ಕಿರಿಯ ಇಂಜಿನಿಯರ್, ಸ.ಕಾ.ಇಂ.ರವರ ಕಚೇರಿ, ಪಂ.ರಾ.ಇಂ.ಉಪ ವಿಭಾಗ, ರಾಣೆಬೆನ್ನೂರು, ಹಾವೇರಿ ಜಿಲ್ಲೆ ಇವರುಗಳು ಮಾಸೂರು ಗ್ರಾಮ ಪಂಚಾಯತಿ ಪ್ರಾಥಮಿಕ ಆರೋಗ್ಯ ಕೇಂದ್ರದ ಅಂಬ್ಯುಲೆನ್ಸ್ ಕಟ್ಟಡ ನಿರ್ಮಾಣದ ಅಂದಾಜು ವೆಚ್ಚದ ಬಗ್ಗೆ ರೂ. 4,518-00 ಗಳನ್ನು ಸರ್ಕಾರಕ್ಕೆ ನಷ್ಟ ಉಂಟು ಮಾಡಿರುವ ಕಾರಣ ತನಿಖೆ ನಡೆಸಿ ಶ್ರೀ ಬಿ.ಬಿ.ಮುದ್ದಪ್ಪನವರ, ಗ್ರಾಮ ಪಂಚಾಯತ್ ಕಾರ್ಯದರ್ಶಿ, ಮಾಸೂರು ಗ್ರಾಮ ಪಂಚಾಯತಿ, ಹಿರೆಕೆರೂರು ತಾಲ್ಲೂಕು ಇವರು ಮರಣ ಹೊಂದಿದ್ದು, ಶ್ರೀ ನಾರಾಯಣಪ್ಪ ವಿ. ಗಾಯಕ್‌ವಾಡ್, ಅಧ್ಯಕ್ಷರು, ಮಾಸೂರು ಗ್ರಾಮ ಪಂಚಾಯತಿ, ಹಿರೆಕೆರೂರು ತಾಲ್ಲೂಕು ಇವರ ಅವಧಿ ಮುಗಿದಿದ್ದು, ಶ್ರೀ ಎಂ.ಜಿ.ಕಮ್ಮಾರ, ಕಿರಿಯ ಇಂಜಿನಿಯರ್ ಇವರ ವಿರುದ್ಧ ಮಾತ್ರ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಕಾಯ್ದೆ ಕಲಂ 12 (3)ರ ಮೂಲ ವರದಿಯನ್ನು ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರಡಿ ಕಳುಹಿಸಿರುವ ತಮ್ಮ ವರದಿಯಲ್ಲಿ ಫಿರ್ಯಾಧಿದಾರರಾದ ಶ್ರೀ ಮೋಹನ್ ದುಂಡಪ್ಪ ನನ್ನುರಿ, ಮಾಸೂರು ಅಂಚೆ, ಹಿರೆಕೆರೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಆರೋಪಿತರಾದ ಶ್ರೀ ಬಿ.ಬಿ.ಮುದ್ದಪ್ಪನವರ, ಗ್ರಾಮ ಪಂಚಾಯತ್ ಕಾರ್ಯದರ್ಶಿ ಮತ್ತು ಶ್ರೀ ನಾರಾಯಣಪ್ಪ ವಿ. ಗಾಯಕ್‌ವಾಡ್, ಅಧ್ಯಕ್ಷರು, ಮಾಸೂರು ಗ್ರಾಮ ಪಂಚಾಯತಿ, ಹಿರೆಕೆರೂರು ತಾಲ್ಲೂಕು ಮತ್ತು ಶ್ರೀ ಎಂ.ಜಿ.ಕಮ್ಮಾರ, ಕಿರಿಯ ಇಂಜಿನಿಯರ್, ಸ.ಕಾ.ಇಂ.ರವರ ಕಚೇರಿ, ಪಂ.ರಾ.ಇಂ.ಉಪ ವಿಭಾಗ, ರಾಣೆಬೆನ್ನೂರು, ಹಾವೇರಿ ಜಿಲ್ಲೆ ರವರುಗಳ ವಿರುದ್ಧ ನೀಡಿರುವ ಲಿಖಿತ ಫಿರ್ಯಾದಿನ ಮೇರೆಗೆ ಸಹಾಯಕ ಇಂಜಿನಿಯರ್-1, ತಾಂತ್ರಿಕ ವಿಂಗ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ದಿನಾಂಕ. 12-02-2008 ರಂದು ನಡೆಸಿರುವ ತನಿಖೆಯಲ್ಲಿ ಮಾಸೂರು ಗ್ರಾಮ ಪಂಚಾಯತಿ ಪ್ರಾಥಮಿಕ ಆರೋಗ್ಯ ಕೇಂದ್ರದ ಅಂಬ್ಯುಲೆನ್ಸ್ ಕಟ್ಟಡ ನಿರ್ಮಾಣದ ಅಂದಾಜು ವೆಚ್ಚದ ಬಗ್ಗೆ ರೂ. 4,518-00 ಗಳನ್ನು ಸರ್ಕಾರಕ್ಕೆ ನಷ್ಟ ಉಂಟು ಮಾಡಿದ್ದು, ಈ ಆರೋಪದ ಮೇರೆಗೆ

ಆರೋಪಿತ ನೌಕರರ ವಿರುದ್ಧ ಮೊಕದ್ದಮೆಯನ್ನು ದಾಖಲಿಸಿ, ಕರ್ನಾಟಕ ಲೋಕಾಯುಕ್ತ ಪೋಲೀಸ್ ಠಾಣೆ, ಬೆಂಗಳೂರು ಪೋಲೀಸ್ ವಿಭಾಗರವರು ಮೊಕದ್ದಮೆಯನ್ನು ದಾಖಲಿಸಿ, ತನಿಖಾಧಿಕಾರಿಯ ಅಂತಿಮ ವರದಿಯ ನಕಲು ಮತ್ತು ತನಿಖಾ ದಾಖಲಾತಿಗಳನ್ನು ಮಾನ್ಯ ಆರಕ್ಷಕ ಮಹಾನಿರೀಕ್ಷಕರು, ಪೋಲೀಸ್ ವಿಭಾಗ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರಿಗೆ ಕಳುಹಿಸುತ್ತಾ, ಈ ಪೈಕಿ ಶ್ರೀ ಬಿ.ಬಿ.ಮುದ್ದಪ್ಪನವರ, ಗ್ರಾಮ ಪಂಚಾಯತ್ ಕಾರ್ಯದರ್ಶಿ, ಮಾಸೂರು ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು ಇವರು ಮರಣ ಹೊಂದಿದ್ದು, ಶ್ರೀ ನಾರಾಯಣಪ್ಪ ವಿ. ಗಾಯಕ್‌ವಾಡ್, ಅಧ್ಯಕ್ಷರು, ಮಾಸೂರು ಗ್ರಾಮ ಪಂಚಾಯತಿ, ಹಿರೇಕೆರೂರು ತಾಲ್ಲೂಕು ಇವರ ಅವಧಿ ಮುಗಿದಿದ್ದು, ಶ್ರೀ ಎಂ.ಜಿ.ಕಮ್ಮಾರ, ಕಿರಿಯ ಇಂಜಿನಿಯರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರ ಕಚೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಣೆಬೆನ್ನೂರು, ಹಾವೇರಿ ಜಿಲ್ಲೆ ಇವರು ಮೇಲ್ಕಂಡ ಕಾಮಗಾರಿಯಲ್ಲಿ ರೂ. 4,518-00 ಗಳನ್ನು ಸರ್ಕಾರಕ್ಕೆ ನಷ್ಟ ಉಂಟು ಮಾಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಇವರ ವಿರುದ್ಧ ಮಾತ್ರ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14 (ಎ)ರಡಿಯಲ್ಲಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಅದರಂತೆ, ಶ್ರೀ ಎಂ.ಜಿ.ಕಮ್ಮಾರ, ಕಿರಿಯ ಇಂಜಿನಿಯರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರ ಕಚೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಣೆಬೆನ್ನೂರು, ಹಾವೇರಿ ಜಿಲ್ಲೆ ಇವರ ವಿರುದ್ಧದ ಆರೋಪವು ಲೋಕಾಯುಕ್ತ ತನಿಖೆಯಲ್ಲಿ ನಿಜವೆಂದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸಿನಂತೆ ಪ್ರಕರಣದಲ್ಲಿನ ಆರೋಪಿತರ ವಿರುದ್ಧ ಶಿಸ್ತು ಕ್ರಮ ಪ್ರಾರಂಭಿಸಲು ಹಾಗೂ ಅದಕ್ಕಾಗಿ ವಿವರವಾದ ಇಲಾಖಾ ವಿಚಾರಣೆ ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14 (ಎ) ರಡಿಯಲ್ಲಿ ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತಕ್ಕೆ ವಹಿಸಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಕೆಳಕಂಡ ಆದೇಶ.

<u>ಆದೇಶ ಸಂಖ್ಯೆ ಗ್ರಾಅಪ 36 ಇಎನ್‌ಕ್ಯೂ 2011, ಬೆಂಗಳೂರು, ದಿನಾಂಕ. 10-11-2011</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಶ್ರೀ ಎಂ.ಜಿ.ಕಮ್ಮಾರ, ಕಿರಿಯ ಇಂಜಿನಿಯರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರ ಕಚೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಣೆಬೆನ್ನೂರು, ಹಾವೇರಿ ಜಿಲ್ಲೆ ಇವರ ವಿರುದ್ಧ ಶಿಸ್ತು ಕ್ರಮ ಪ್ರಾರಂಭಿಸಿ ಇಲಾಖಾ ವಿಚಾರಣೆ ನಡೆಸಲು ಈ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

10/11/2011
(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

10/11/2011

ಪ್ರತಿ;
1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.

2. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
3. ಉಪ ನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
4. ಕರ್ನಾಟಕ ಉಪ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ.
8. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
9. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು – ಸಿ).
10. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಪಂಚಾಯತ್ ಶಾಖೆ.
11. ಶ್ರೀ ಎಂ.ಜಿ.ಕಮ್ಮಾರ, ಕಿರಿಯ ಇಂಜಿನಿಯರ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರ ಕಚೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ರಾಣಿಬೆನ್ನೂರು, ಹಾವೇರಿ ಜಿಲ್ಲೆ
12. ಗ್ರಾ.ಅ.ರಾಜ್ ಇಲಾಖೆಯ ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ(ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
13. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
14. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ :